ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳಿಗೆ ಸಹಾಯ ಧನ

3623(4364) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಸಣ್ಣ ಕೈಗಾರಿಕೆ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಹಾಲಿ ಇರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು;

ಆ) ಕಳೆದ ಮೂರು ಸಾಲಿನಲ್ಲಿ ಹೊಸದಾಗಿ ಪ್ರಾರಂಭಗೊಂಡ ಮತ್ತು ಮುಚ್ಚಿ ಹೋದ ಕಾರ್ಖಾನೆಗಳ ಸಂಖ್ಯೆ ಎಷ್ಟು;

ಇ) ರಾಜ್ಯ ಸರ್ಕಾರ ಸಣ್ಣ ಕೈಗಾರಿಕೆಗಳಿಗೆ ಬಿಡುಗಡೆ ಮಾಡಬೇಕಾದ ಸಹಾಯಧನದ ಬಾಕಿ ಮೊತ್ತ ಎಷ್ಟು; ಯಾವ ಸಾಲಿನಿಂದ ಬಾಕಿ ಇದೆ;

ಈ) ಈ ಸಾಲಿನಲ್ಲಿ ಇದುವರೆಗೆ ಬಿಡುಗಡೆಯಾದ ಮೊತ್ತ ಎಷ್ಟು?

ಶ್ರೀ ಆರ್. ರೋಷನ್ ಬೇಗ್ (ಸಣ್ಣ ಕೈಗಾರಿಕೆ ಮತ್ತು ಹಜ್ ಸಚಿವರು) :

ಅ) 2,99,407

ಆ) ಈ ಅವಧಿಯಲ್ಲಿ 45,507 ಸಣ್ಣ ಕೈಗಾರಿಕೆಗಳು ನೋಂದಾಯಿತವಾಗಿವೆ. ಮಾದರಿ ಸಮೀಕ್ಷಾ ವರದಿ ಪ್ರಕಾರ ರಾಜ್ಯದಲ್ಲಿ ಶೇಕಡಾ 28.95ರಷ್ಟು ಅಂತಹ ಘಟಕಗಳು ಮುಚ್ಚಿರುವುದಾಗಿ ತಿಳಿದು ಬಂದಿದೆ.

ಇ) ದಿನಾಂಕ : 1.1.99 ರಿಂದ 30.3.2003 ರವರೆಗಿನ ಅವಧಿಗೆ ರೂ. 405.67 ಕೋಟಿ ಬಾಕಿ ಇರುತ್ತದೆ.

ಈ) ಯಾವುದೇ ಮೊತ್ತ ಬಿಡುಗಡೆಯಾಗಿರುವುದಿಲ್ಲ.

ರಾಜ್ಯದಲ್ಲಿ ಅಂಬೇಡ್ಕರ್ ಭವನ ನಿರ್ಮಾಣ

3624(4372) ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸರ್ಕಾರವು ಯೋಚಿಸಿರುವಂತೆ ರಾಜ್ಯದಲ್ಲಿನ ವಿಧಾನಸಭಾ ಕ್ಷೇತ್ರಗಳಲ್ಲಿ, ತಲಾ ಎರಡು ಅಂಬೇಡ್ಕರ್ ಭವನಗಳ ನಿರ್ಮಾಣದ ಸಂಬಂಧವಾಗಿ ಕಾರ್ಯಕ್ರಮವನ್ನು ರೂಪಿಸಿದೆಯೇ;

ಆ) ಕಾರ್ಯಕ್ರಮವನ್ನು ರೂಪಿಸಲಾಗಿದ್ದಲ್ಲಿ, ಅದರ ವಿವರಗಳೇನು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಮತ್ತು ಆ) ಹೌದು.

ಸರ್ಕಾರವು ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ 2 ಅಂಬೇಡ್ಕರ್ ಭವನಗಳನ್ನು ನಿರ್ಮಾಣ ಮಾಡಲು ತಲಾ ರೂ. 5.00 ಲಕ್ಷಗಳನ್ನು ಒದಗಿಸಲಾಗುತ್ತಿದ್ದು, ಇದರ ಜೊತೆಗೆ ಹೆಚ್ಚುವರಿ ವೆಚ್ಚವನ್ನು ಸ್ಥಳೀಯ ವಂತಿಕೆಯಿಂದ ಭರಿಸಬೇಕಾಗುತ್ತದೆ. ಈ ಕಾರ್ಯಕ್ರಮದ ಬಗ್ಗೆ ಮಾರ್ಗದರ್ಶಿಯನ್ನು ತಯಾರಿಸಲಾಗುತ್ತಿದೆ.

ರಾಜ್ಯದಲ್ಲಿ ಸಕ್ಕರೆ ಅಭಿವೃದ್ಧಿ ನಿಧಿ ಸ್ಥಾಪನೆ

3625(4373) ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) : ಮಾನ್ಯ ಪಶು ಸಂಗೋಪನೆ ಹಾಗೂ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಸಕ್ಕರೆ ಅಭಿವೃದ್ಧಿ ನಿಧಿ ಸ್ಥಾಪಿಸಲಾಗುತ್ತಿದೆಯೇ;

ಆ) ಹಾಗಿದ್ದಲ್ಲಿ ಈ ಸಂಬಂಧವಾಗಿ ಸಂಪನ್ಮೂಲ ಕ್ರೋಢೀಕರಣದ ವಿವರಗಳೇನು;